Akashvani: Bangalore
National Bulletin In Kannada
20.08.2026: 13.10hrs
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
20.08.2026: 13.10hrs
**********

**ಮುಖ್ಯಾಂಶಗಳು:**

1. ಕೇಂದ್ರ ಗೃಹ ಸಚಿವ ಅಮಿತ್ ಶಾ ಅಧ್ಯಕ್ಷತೆಯಲ್ಲಿ ದಕ್ಷಿಣ ವಲಯ ಮಂಡಳಿಯ ೩೧ನೇ ಸಭೆ ಪ್ರಗತಿಯಲ್ಲಿ
2. ಬ್ರಿಕ್ಸ್ ಅಧ್ಯಕ್ಷತೆಯನ್ನು ಮಾನವೀಯತೆ ಮೊದಲು ಮನೋಭಾವದಲ್ಲಿ ಮಾರ್ಗದರ್ಶಿಸಲು ಭಾರತ ಬದ್ಧ: ಭೂಪೇಂದರ್ ಯಾದವ್
3. ವಿಶ್ವಸಂಸ್ಥೆಯ ಭದ್ರತಾ ಮಂಡಳಿಯಲ್ಲಿ ತುರ್ತು ಸುಧಾರಣೆಗಳಿಗೆ ಭಾರತ ಕರೆ
4. ಎಫ್‌ಐಎಚ್ ಹಾಕಿ ವಿಶ್ವಕಪ್: ಇಂದು ಸಂಜೆ ಇಂಗ್ಲೆಂಡ್ ಮಹಿಳಾ ತಂಡದೊಂದಿಗೆ ಭಾರತೀಯ ವನಿತೆಯರ ಹಣಾಹಣಿ

*********

ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ಅಧ್ಯಕ್ಷತೆಯಲ್ಲಿಂದು ತಮಿಳುನಾಡಿನ ಚೆನ್ನೈ ಬಳಿಯ ಕೋವಲಂನಲ್ಲಿ ದಕ್ಷಿಣ ವಲಯ ಮಂಡಳಿಯ ೩೧ನೇ ಸಭೆ ನಡೆಯುತ್ತಿದೆ. ಕೇಂದ್ರ ಮತ್ತು ದಕ್ಷಿಣ ರಾಜ್ಯಗಳು ಹಾಗೂ ಕೇಂದ್ರಾಡಳಿತ ಪ್ರದೇಶಗಳ ನಡುವಿನ ಸಮನ್ವಯದ ಅಗತ್ಯವಿರುವ ವಿಷಯಗಳ ಕುರಿತು ಸಭೆಯಲ್ಲಿ ಚರ್ಚೆಗಳಾಗಲಿವೆ. ದಕ್ಷಿಣ ವಲಯ ಮಂಡಳಿಯು ಆಂಧ್ರಪ್ರದೇಶ, ಕರ್ನಾಟಕ, ಕೇರಳ, ತಮಿಳುನಾಡು ಮತ್ತು ತೆಲಂಗಾಣವನ್ನು ಒಳಗೊಂಡಿದೆ. ಜೊತೆಗೆ ಪುದುಚೇರಿ, ಅಂಡಮಾನ್-ನಿಕೋಬಾರ್ ದ್ವೀಪಗಳು ಮತ್ತು ಲಕ್ಷದ್ವೀಪ ಕೇಂದ್ರಾಡಳಿತ ಪ್ರದೇಶಗಳನ್ನು ಒಳಗೊಂಡಿದೆ. ಕರ್ನಾಟಕ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ತಮಿಳುನಾಡು ಮುಖ್ಯಮಂತ್ರಿ ಜೋಸೆಫ್ ವಿಜಯ್, ಕೇರಳ ಮುಖ್ಯಮಂತ್ರಿ ಸತೀಶನ್, ತೆಲಂಗಾಣ ಮುಖ್ಯಮಂತ್ರಿ ರೇವಂತ್ ರೆಡ್ಡಿ, ಆಂಧ್ರಪ್ರದೇಶ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ಮತ್ತು ಪುದುಚೇರಿ ಮುಖ್ಯಮಂತ್ರಿ ರಂಗಸಾಮಿ  ಸಮ್ಮೇಳನದಲ್ಲಿ ಭಾಗವಹಿಸಲಿದ್ದಾರೆ. ಅಂಡಮಾನ್ ನಿಕೋಬಾರ್ ದ್ವೀಪಗಳು ಮತ್ತು ಲಕ್ಷದ್ವೀಪದ ಆಡಳಿತಗಾರರು ಸಹ ಸಭೆಯಲ್ಲಿ ಭಾಗವಹಿಸುವ ಸಾಧ್ಯತೆಯಿದೆ.

*********

ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದಲ್ಲಿ ಭಾರತ ತನ್ನ ಬ್ರಿಕ್ಸ್ ಅಧ್ಯಕ್ಷತೆಯನ್ನು ಜನ-ಕೇಂದ್ರಿತ ಮತ್ತು 'ಮಾನವೀಯತೆ ಮೊದಲು' ಎಂಬ ಮನೋಭಾವದಿಂದ ಮಾರ್ಗದರ್ಶಿಸಲ್ಪಡಲು ಬದ್ಧವಾಗಿದೆ ಎಂದು ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವ ಭೂಪೇಂದರ್ ಯಾದವ್ ಹೇಳಿದ್ದಾರೆ. ಇಂಗ್ಲಿಷ್ ದಿನಪತ್ರಿಕೆಯೊಂದರಲ್ಲಿ ಬರೆದ ತಮ್ಮ ಲೇಖನವನ್ನು ಹಂಚಿಕೊಂಡ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಅವರು, ಭಾರತ ಮಿಷನ್ ಲೈಫ್ ತತ್ವಗಳ ಆಧಾರದ ಮೇಲೆ ಸುಸ್ಥಿರ ಜೀವನಶೈಲಿಯನ್ನು ಉತ್ತೇಜಿಸುವತ್ತ ಗಮನಹರಿಸಿದೆ. ಜೊತೆಗೆ ಅರಣ್ಯೀಕರಣ, ಕಾಡ್ಗಿಚ್ಚು ನಿರ್ವಹಣೆ, ವಿಪತ್ತು ಸ್ಥಿತಿಸ್ಥಾಪಕತ್ವ ಮತ್ತು ಸಾಂಪ್ರದಾಯಿಕ ಜ್ಞಾನದಲ್ಲಿ ಬೇರೂರಿರುವ ಜನ-ಕೇಂದ್ರಿತ ಹವಾಮಾನ ಹೊಂದಾಣಿಕೆಯತ್ತ ಗಮನಹರಿಸಿದೆ ಎಂದು ಹೇಳಿದರು. ಭಾರತದ ಬ್ರಿಕ್ಸ್ ಅಧ್ಯಕ್ಷತೆಯು ಭೂಮಿಯನ್ನು ಸಾಮೂಹಿಕ ಬೆಳವಣಿಗೆ, ಸ್ಥಿತಿಸ್ಥಾಪಕ ಅಭಿವೃದ್ಧಿ, ನಾವೀನ್ಯತೆ ಮತ್ತು ಜ್ಞಾನ ಹಂಚಿಕೆಯ ಕೇಂದ್ರದಲ್ಲಿ ಇರಿಸುವ ಭವಿಷ್ಯದತ್ತ ಕೆಲಸ ಮಾಡುತ್ತಿದೆ ಎಂದು ಅವರು ತಿಳಿಸಿದ್ದಾರೆ.

*********

ವಿಶ್ವಸಂಸ್ಥೆಯ ಭದ್ರತಾ ಮಂಡಳಿ - ಯುಎನ್‌ಎಸ್‌ಸಿಯ ರಚನೆ ಮತ್ತು ನಿರ್ಧಾರ ತೆಗೆದುಕೊಳ್ಳುವ ಪ್ರಕ್ರಿಯೆಯು ಇಂದಿನ ಜಾಗತಿಕ ವಾಸ್ತವಗಳನ್ನು ಪ್ರತಿಬಿಂಬಿಸಬೇಕು. ಮುಖ್ಯವಾಗಿ ಅಭಿವೃದ್ಧಿಶೀಲ ರಾಷ್ಟ್ರಗಳಿಗೆ ಹೆಚ್ಚಿನ ಪ್ರಾತಿನಿಧ್ಯವನ್ನು ಒದಗಿಸಬೇಕು. ಈ ನಿಟ್ಟಿನಲ್ಲಿ ವಿಶ್ವಸಂಸ್ಥೆಯ ಭದ್ರತಾ ಮಂಡಳಿ ತುರ್ತು ಸುಧಾರಣೆಗಳನ್ನು ಕೈಗೊಳ್ಳಬೇಕೆಂದು ಭಾರತ ಕರೆ ನೀಡಿದೆ. ಕಾರ್ಯ ವಿಧಾನಗಳ ಕುರಿತಾದ ಯುಎನ್‌ಎಸ್‌ಸಿ ಮುಕ್ತ ಚರ್ಚೆಯಲ್ಲಿ ಮಾತನಾಡಿದ ವಿಶ್ವಸಂಸ್ಥೆಗೆ ಭಾರತದ ಉಸ್ತುವಾರಿ ಯೋಜನಾ ಪಟೇಲ್, ಸುಧಾರಣೆಯ ಅಗತ್ಯವು ಹಿಂದೆಂದಿಗಿಂತಲೂ ಹೆಚ್ಚು ಸ್ಪಷ್ಟವಾಗಿದೆ. ೧೯೪೫ ರಿಂದ ವಿಶ್ವಸಂಸ್ಥೆಯ ಸದಸ್ಯತ್ವ ಗಮನಾರ್ಹವಾಗಿ ಹೆಚ್ಚಾಗಿದ್ದು, ಹಿಂದಿನ ವಾಸ್ತವಗಳಿಂದ ಭದ್ರತಾ ಮಂಡಳಿಯು ರೂಪುಗೊಳ್ಳುವುದನ್ನು ಮುಂದುವರಿಸಲು ಸಾಧ್ಯವಿಲ್ಲ ಎಂದು ಅವರು ತಿಳಿಸಿದರು. ಜಾಗತಿಕ ದಕ್ಷಿಣಕ್ಕೆ ಹೆಚ್ಚಿನ ಪ್ರಾತಿನಿಧ್ಯದೊಂದಿಗೆ ಶಾಶ್ವತ ಮತ್ತು ಶಾಶ್ವತವಲ್ಲದ ಸದಸ್ಯತ್ವ ಎರಡರಲ್ಲೂ ವಿಸ್ತರಣೆಯ ಬೇಡಿಕೆಯನ್ನು ಭಾರತ ಪುನರುಚ್ಚರಿಸಿತು. ಸ್ಪಷ್ಟ ಮೈಲಿಗಲ್ಲುಗಳು ಮತ್ತು ಗಡುವುಗಳೊಂದಿಗೆ ಪಠ್ಯ ಆಧಾರಿತ ಮಾತುಕತೆಗಳ ಮೂಲಕ ಸುಧಾರಣೆಗಳನ್ನು ಅನುಸರಿಸಬೇಕು ಎಂದು ಅವರು ಹೇಳಿದರು.

*********

ನವದೆಹಲಿಯಲ್ಲಿಂದು ಭಾರತ ಮತ್ತು ಜಪಾನ್ ರಕ್ಷಣಾ ಸಚಿವರ ದ್ವಿಪಕ್ಷೀಯ ಸಭೆ ಪ್ರಗತಿಯಲ್ಲಿದೆ. ರಕ್ಷಣಾ ಸಚಿವ ರಾಜನಾಥ್ ಸಿಂಗ್ ಮತ್ತು ಜಪಾನ್ ರಕ್ಷಣಾ ಸಚಿವ ಶಿಂಜಿರೊ ಕೊಯಿಜುಮಿ ಅವರ ಅಧ್ಯಕ್ಷತೆಯಲ್ಲಿ ಸಭೆ ನಡೆಯುತ್ತಿದ್ದು, ರಕ್ಷಣಾ ಸಂಬಂಧಗಳನ್ನು ಮತ್ತಷ್ಟು ಬಲಪಡಿಸಲು ಗಮನ ಹರಿಸುವ ನಿರೀಕ್ಷೆಯಿದೆ. ಜೊತೆಗೆ ಉಭಯ ದೇಶಗಳ ನಡುವೆ ಕಾರ್ಯತಂತ್ರದ ವಿಶ್ವಾಸ ಮತ್ತು ಸಹಕಾರ ಹೆಚ್ಚಿಸಲು ಆದ್ಯತೆ ನೀಡಲಾಗುತ್ತದೆ. ಮುಖ್ಯವಾಗಿ ಇಂಡೋ-ಪೆಸಿಫಿಕ್ ಪ್ರದೇಶದಲ್ಲಿ ಸ್ಥಿರತೆ ಮತ್ತು ಭದ್ರತೆಗೆ ಮಹತ್ವ ನೀಡಲಾಗುತ್ತದೆ. ಮೇಕ್-ಇನ್-ಇಂಡಿಯಾ ಚೌಕಟ್ಟಿನಡಿಯಲ್ಲಿ ಕಡಲ ಭದ್ರತಾ ಸಹಕಾರ ಮತ್ತು ನಿಕಟ ರಕ್ಷಣಾ ಸಾಧನಗಳು ಹಾಗೂ ತಂತ್ರಜ್ಞಾನದ ಸಹಯೋಗದ ಕುರಿತು ಉಭಯ ಸಚಿವರು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಳ್ಳಲಿದ್ದಾರೆ ಎಂದು ರಕ್ಷಣಾ ಸಚಿವಾಲಯ ಹೇಳಿದೆ.

*********

ಕೇಂದ್ರ ಗೃಹ ಸಚಿವ ಅಮಿತ್ ಶಾ ಮೂರು ದಿನಗಳ ಭೇಟಿಗಾಗಿ ಪಶ್ಚಿಮ ಬಂಗಾಳಕ್ಕೆ ತೆರಳಲಿದ್ದಾರೆ. ಅವರು ಆಡಳಿತಾತ್ಮಕ ಸಭೆಗಳು ಸೇರಿದಂತೆ ಉತ್ತರ ಬಂಗಾಳದಲ್ಲಿ ಹಲವಾರು ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದಾರೆ. ಗಡಿ ಭದ್ರತೆಗೆ ಸಂಬಂಧಿಸಿದ ಹಲವಾರು ಯೋಜನೆಗಳನ್ನು ಸಹ ಅವರು ಉದ್ಘಾಟಿಸಲಿದ್ದಾರೆ. ನಾಳೆ, ಅವರು ಸಿಲಿಗುರಿಯ ಕವಾಖಾಲಿಯಲ್ಲಿ ಹೊಸ ಅಪರಾಧ ಕಾನೂನುಗಳ ಕುರಿತು ಐದು ದಿನಗಳ ವಿಶೇಷ ನ್ಯಾಯ ಸಂಹಿತೆ ಪ್ರದರ್ಶನವನ್ನು ಉದ್ಘಾಟಿಸಲಿದ್ದಾರೆ. ಮುಖ್ಯಮಂತ್ರಿ ಸುವೇಂದು ಅಧಿಕಾರಿ ಕೂಡ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

*********

ಇಂದು ನಡೆಯಲಿರುವ ಭಾರತ-ಸಿಂಗಾಪುರ ಸಚಿವರ ದುಂಡು ಮೇಜಿನ ಸಭೆಯ ೪ ನೇ ಸುತ್ತಿನಲ್ಲಿ ಭಾಗವಹಿಸಲು ಭಾರತದ ಸಚಿವರು ಸಿಂಗಾಪುರಕ್ಕೆ ಭೇಟಿ ನೀಡಿದ್ದಾರೆ. ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಇಂದು ಸಿಂಗಾಪುರದಲ್ಲಿ ಸಿಂಗಾಪುರ ಪ್ರಧಾನಿ ಲಾರೆನ್ಸ್ ವಾಂಗ್ ಅವರನ್ನು ಭೇಟಿಯಾದರು. ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್, ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಮತ್ತು ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ರಾಜ್ಯ ಸಚಿವ ಜಿತಿನ್ ಪ್ರಸಾದ ಕೂಡ ಸಭೆಯಲ್ಲಿ ಹಾಜರಿದ್ದರು. ಈ ಸಂದರ್ಭದಲ್ಲಿ ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಗಾಗಿ ಮಾರ್ಗಸೂಚಿಯನ್ನು ಅನುಷ್ಠಾನಗೊಳಿಸುವಲ್ಲಿನ ಪ್ರಗತಿಯನ್ನು ನಾಯಕರು ಪರಿಶೀಲಿಸಿದರು. ಜೊತೆಗೆ ಆರ್ಥಿಕ ಸಹಕಾರ, ಡಿಜಿಟಲೀಕರಣ,

ಸಂಪರ್ಕ, ಕೌಶಲ್ಯ ಅಭಿವೃದ್ಧಿ ಮತ್ತು ಸುಸ್ಥಿರತೆ ಸೇರಿದಂತೆ ಕ್ಷೇತ್ರಗಳಲ್ಲಿ ದ್ವಿಪಕ್ಷೀಯ ಸಹಕಾರವನ್ನು ಮತ್ತಷ್ಟು ಬಲಪಡಿಸುವ ಮಾರ್ಗಗಳ ಬಗ್ಗೆ ಚರ್ಚಿಸಿದರು ಎಂದು ಹಣಕಾಸು ಸಚಿವಾಲಯ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ತಿಳಿಸಿದೆ.

*********

ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಇರಾನ್ ವಿರುದ್ಧ ಹೊಸ ಆರ್ಥಿಕ ಯುದ್ಧವನ್ನು ಘೋಷಿಸಿದ್ದಾರೆ. ಟ್ರೂತ್ ಸಾಮಾಜಿಕ ಜಾಲತಾಣದಲ್ಲಿನ ಪೋಸ್ಟ್‌ನಲ್ಲಿ ಅವರು, ಇರಾನ್‌ಗೆ ಅಮೆರಿಕದೊಂದಿಗೆ ಒಪ್ಪಂದ ಮಾಡಿಕೊಳ್ಳಲು ಹಲವಾರು ಅವಕಾಶಗಳನ್ನು ನೀಡಲಾಯಿತು. ಆದರೆ ಇರಾನ್ ಅಮೆರಿಕದೊಂದಿಗೆ ಒಪ್ಪಂದ ಮಾಡಿಕೊಳ್ಳುವಲ್ಲಿ ವಿಫಲವಾಯಿತು. ಹೀಗಾಗಿ ವಾಷಿಂಗ್ಟನ್ ಈಗ ಟೆಹ್ರಾನ್ ವಿರುದ್ಧ ಅಭೂತಪೂರ್ವ ಆರ್ಥಿಕ ಯುದ್ಧ ಪ್ರಾರಂಭಿಸುತ್ತದೆ ಎಂದು ಅವರು ಹೇಳಿದ್ದಾರೆ.ಇದೇ ಸಂದರ್ಭದಲ್ಲಿ ಟೆಹ್ರಾನ್‌ಗೆ ಸಹಾಯ ಮಾಡುವ ಯಾವುದೇ ದೇಶಕ್ಕೆ ಆರ್ಥಿಕ ಶಿಕ್ಷೆ ವಿಧಿಸುವುದಾಗಿಯೂ ಡೊನಾಲ್ಡ್ ಟ್ರಂಪ್ ಎಚ್ಚರಿಸಿದ್ದಾರೆ.

*********

ಭಾರತವು ಕಾಬೂಲ್‌ನಲ್ಲಿರುವ ಸರ್ಕಾರಿ ಆಸ್ಪತ್ರೆಗೆ ಔಷಧಿಗಳು ಮತ್ತು ವೈದ್ಯಕೀಯ ಸಲಕರಣೆಗಳನ್ನು ತಲುಪಿಸಿದೆ. ಇದರೊಂದಿಗೆ ಭಾರತ, ಅಫ್ಘಾನಿಸ್ತಾನದ ಜನರೊಂದಿಗಿನ ತನ್ನ ದೀರ್ಘಕಾಲದ ಆರೋಗ್ಯ ಪಾಲುದಾರಿಕೆಯನ್ನು ಪುನರುಚ್ಚರಿಸಿದೆ. ಈ ನೆರವು ಅಫ್ಘಾನಿಸ್ತಾನದ ಸ್ನೇಹಪರ ಜನರ ಆರೋಗ್ಯ ಅಗತ್ಯಗಳನ್ನು ಬೆಂಬಲಿಸುವ ಭಾರತದ ನಿರಂತರ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ ಎಂದು ವಿದೇಶಾಂಗ ಸಚಿವಾಲಯ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ತಿಳಿಸಿದೆ. ವೈದ್ಯಕೀಯ ಸರಬರಾಜುಗಳು ಕಾಬೂಲ್‌ನಲ್ಲಿರುವ ಸರ್ಕಾರಿ ಆಸ್ಪತ್ರೆಯಲ್ಲಿ ಆರೋಗ್ಯ ಸೇವೆಗಳನ್ನು ಹೆಚ್ಚಿಸುವ ಗುರಿಯನ್ನು ಹೊಂದಿವೆ.

*********

ಉಕ್ರೇನ್‌ನ ರಾಜಧಾನಿ ಕೈವ್ ಮೇಲೆ ರಷ್ಯಾ ರಾತ್ರಿಯಿಡೀ ಕ್ಷಿಪಣಿ ದಾಳಿ ನಡೆಸಿದ್ದು, ಕನಿಷ್ಠ ಆರು ಜನರು ಮೃತಪಟ್ಟಿದ್ದು ೩೩ ಜನರು ಗಾಯಗೊಂಡಿದ್ದಾರೆ. ಉಕ್ರೇನ್‌ನ ತುರ್ತು ಸೇವೆಯ ಪ್ರಕಾರ, ಮೂರು ಜಿಲ್ಲೆಗಳಾದ್ಯಂತ ೧೨ ಸ್ಥಳಗಳ ಮೇಲೆ ದಾಳಿಗಳು ನಡೆದಿದ್ದು, ವಸತಿ ಕಟ್ಟಡಗಳು, ವೈದ್ಯಕೀಯ ಸೌಲಭ್ಯ ಮತ್ತು ಶಿಕ್ಷಣ ಸಂಸ್ಥೆಗೆ ಹಾನಿಯಾಗಿದೆ. ಸೊಲೊಮಿಯನ್ಸ್ಕಿ ಜಿಲ್ಲೆಯಲ್ಲಿ, ಒಂಬತ್ತು ಅಂತಸ್ತಿನ ವಸತಿ ಕಟ್ಟಡದ ಮೇಲಿನ ಎರಡು ಮಹಡಿಗಳು ನಾಶವಾಗಿವೆ. ತುರ್ತು

ಸಿಬ್ಬಂದಿ ಅವಶೇಷಗಳ ಅಡಿಯಲ್ಲಿ ಸಿಲುಕಿರುವ ಜನರನ್ನು ರಕ್ಷಿಸಿದರು. ಕೈವ್ ಮೇಲೆ ರಷ್ಯಾ ಬ್ಯಾಲಿಸ್ಟಿಕ್ ಕ್ಷಿಪಣಿ ದಾಳಿಗಳನ್ನು ತೀವ್ರಗೊಳಿಸುತ್ತಿರುವುದರಿಂದ ಉಕ್ರೇನ್‌ನ ಸೀಮಿತ ವಾಯು ರಕ್ಷಣಾ ಸಾಮರ್ಥ್ಯಗಳ ಮೇಲೆ ಒತ್ತಡ ತೀವ್ರಗೊಂಡಿದೆ.

*********

ಭಾರತದ ಮಾಜಿ ಪ್ರಧಾನಿ ರಾಜೀವ್ ಗಾಂಧಿ ಅವರ ಜನ್ಮ ವಾರ್ಷಿಕೋತ್ಸವ. ಹಿನ್ನೆಲೆಯಲ್ಲಿ ಉಪರಾಷ್ಟ್ರಪತಿ, ಪ್ರಧಾನಿ ಸೇರಿದಂತೆ ಗಣ್ಯರು ಇಂದು ಮಾಜಿ ಪ್ರಧಾನಿಗೆ ಗೌರವ ನಮನ ಸಲ್ಲಿಸಿದ್ದಾರೆ. ಉಪರಾಷ್ಟ್ರಪತಿ ಸಿ.ಪಿ ರಾಧಾಕೃಷ್ಣನ್ ಅವರು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ರಾಷ್ಟ್ರಕ್ಕೆ ಮಾಜಿ ಪ್ರಧಾನಿ ನೀಡಿದ ಸೇವೆ ಮತ್ತು ಸಾರ್ವಜನಿಕ ಜೀವನಕ್ಕೆ ನೀಡಿದ ಕೊಡುಗೆಯನ್ನು ಸ್ಮರಿಸುವುದಾಗಿ ಹೇಳಿದ್ದಾರೆ. ಭಾರತದ ಮಾಜಿ ಪ್ರಧಾನಿ ರಾಜೀವ್ ಗಾಂಧಿ ಅವರ ಜನ್ಮ ವಾರ್ಷಿಕೋತ್ಸವದ ಅಂಗವಾಗಿ ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಅವರಿಗೆ ಗೌರವ ಸಲ್ಲಿಸಿದರು. ರಾಜೀವ್ ಗಾಂಧಿ ಅಕ್ಟೋಬರ್ ೧೯೮೪ ರಿಂದ ಡಿಸೆಂಬರ್ ೧೯೮೯ ರವರೆಗೆ ಭಾರತದ ಪ್ರಧಾನ ಮಂತ್ರಿಯಾಗಿದ್ದರು.

*********

ಹಾಕಿಯಲ್ಲಿ ಭಾರತೀಯ ಮಹಿಳಾ ತಂಡವು ಇಂದು ಆಮ್ಸ್ಟೆಲ್ವೀನ್‌ನ ವ್ಯಾಗೆನರ್ ಕ್ರೀಡಾಂಗಣದಲ್ಲಿ ಎಫ್‌ಐಎಚ್ ಹಾಕಿ ವಿಶ್ವಕಪ್‌ನ ಕೊನೆಯ ಪೂಲ್ ಡಿ ಪಂದ್ಯದಲ್ಲಿ ಇಂಗ್ಲೆಂಡ್ ಅನ್ನು ಎದುರಿಸಲಿದೆ. ಪಂದ್ಯವು ಭಾರತೀಯ ಕಾಲಮಾನದ ಪ್ರಕಾರ ಸಂಜೆ ೬:೩೦ಕ್ಕೆ ಆರಂಭವಾಗಲಿದೆ. ಪಂದ್ಯದಲ್ಲಿ ಗೆಲುವು ಅಥವಾ ಡ್ರಾ ಸಾಧಿಸಿದರೆ ಭಾರತ ತಂಡವು ಪಾಯಿಂಟ್ ಪಟ್ಟಿಯಲ್ಲಿ ಅಗ್ರಸ್ಥಾನ ಪಡೆದು ಮುಂದಿನ ಸುತ್ತಿಗೆ ಅರ್ಹತೆ ಪಡೆಯುತ್ತದೆ. ಮಂಗಳವಾರ ದಕ್ಷಿಣ ಆಫ್ರಿಕಾ ವಿರುದ್ಧ ದಾಖಲೆಯ ೬-೧ ಅಂತರದ ಗೆಲುವಿನ ನಂತರ ಭಾರತೀಯ ವನಿತೆಯರ ತಂಡದ ಆತ್ಮವಿಶ್ವಾಸ ಹೆಚ್ಚಾಗಿದೆ. ಈ ಗೆಲುವು ಭಾರತದ ಹಿಂದಿನ ಅತಿದೊಡ್ಡ ವಿಶ್ವಕಪ್ ಗೆಲುವಾದ ೧೯೭೪ ರ ಉದ್ಘಾಟನಾ ಆವೃತ್ತಿಯಲ್ಲಿ ಸ್ಪೇನ್ ವಿರುದ್ಧ ೪-೧ ಅಂತರದ ಜಯವನ್ನು ಸಹ ಮೀರಿಸಿದೆ. ಈ ಗೆಲುವಿನೊಂದಿಗೆ, ಭಾರತ ಎರಡು ಪಂದ್ಯಗಳಿಂದ ನಾಲ್ಕು ಅಂಕಗಳೊಂದಿಗೆ ಪೂಲ್ ಡಿಯಲ್ಲಿ ಅಗ್ರಸ್ಥಾನಕ್ಕೆ ಏರಿದೆ. ಈ ನಡುವೆ, ಚೀನಾ ವಿರುದ್ಧ ೪-೨ ಅಂತರದ ಸೋಲು ಕಂಡಿರುವ ಇಂಗ್ಲೆಂಡ್ ತಂಡಕ್ಕೂ ಇಂದಿನ ಪಂದ್ಯವನ್ನು ಗೆಲ್ಲುವುದು ಅತಿ ಮುಖ್ಯವಾಗಿದೆ.

*****END****